# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:115 RNI NO.KAR KAN/2003/10452:No./PMG/KA/NK/BM/743/24-26 ಶನಿವಾರ ದಿನಾಂಕ: 30–03–2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

## ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ



ಬೆಳಗಾವಿ, ಮಾ.29: ಜಿಲ್ಲೆಯಲ್ಲಿ ಮುಂದಿನ ಎರಡು ತಿಂಗಳ ಅವಧಿಯಲ್ಲಿ ಜನರಿಗೆ ಹಾಗೂ ಜಾನುವಾರುಗಳಿಗೆ ನೀರು, ಮೇವಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು. ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರು ಪೂರೈಕೆಗೆ ನಿರಂತರ ಸಭೆ ನಡೆಸಬೇಕು. ಯಾವುದೇ ಸಮಸ್ಯೆಗಳು ಎದುರಾದಲ್ಲಿ ಅಧಿಕಾರಿಗಳು ತಕ್ಷಣವೇ ಪರಿಹಾರಕ್ಕೆ ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ (ಮಾ.29) ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬರ ನಿರ್ವಹಣೆಗೆ ಯಾವುದೇ ರೀತಿಯ ಅನುದಾನದ ಕೊರತೆ ಇರುವುದಿಲ್ಲ. ಬರಪೀಡಿತ ಪ್ರದೇಶಗಳನ್ನು ಗುರುಸಿತಿಸಿ, ಜನ?ಜಾನುವಾರಿಗೆ ನೀರು, ಮೇವಿನ ಲಭ್ಯತೆ ನೋಡಿಕೊಂಡು ನಿರ್ವಹಣೆ ಮಾಡಬೇಕು ಎಂದು ತಿಳಿಸಿದರು.

ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಸಾಕಷ್ಟಿದೆ. ನೆರೆಯ ಜಲಾಶಯಗಳಲ್ಲಿ ನೀರಿನ ಲಭ್ಯತೆಯಿದಲ್ಲಿ ಅಗತ್ಯಕ್ಕೆ ತಕ್ಕಂತೆ ನೀರು ಬಿಡುಗಡೆ ಮಾಡಬೇಕು. ಹಿಪ್ಪರಗಿ ಬ್ಯಾರೇಜ್ ನಂದ ಕಕ್ಕಮರಿ, ಜುಂಜರವಾಡ ಗ್ರಾಮಗಳಿಗೆ ಕುಡಿಯುವ ನೀರು ಬಿಡುಗಡೆ ಅತ್ಯಗತ್ಯವಿದ್ದು ಕೂಡಲೇ 100 ಕ್ಯೂಸೆಕ್ ನೀರು ಬಿಡುಗಡೆಗೆ ಪ್ರಾದೇಶಿಕ ಆಯುಕ್ತರಿಗೆ ಪತ್ರ ಬರೆಯಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಲಾಶಯಗಳಲ್ಲಿ ನೀರಿನ ಮಟ್ಟ ಕಡಿಮೆಯಾಗಿರುವುದರಿಂದ ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ನಿರ್ವಹಣೆಗಾಗಿ ನದಿಯ ಬದಿಯಲ್ಲಿರುವ ಎಲ್ಲ ಪಂಪ್ ಸೆಟ್ ಗಳಿಗೆ ವಿದ್ಯುತ್ ಕಡಿತಗೊಳಿಸಬೇಕು. ಕುಡಿಯುವ ನೀರಿನ ಅಗತ್ಯವಿದ್ದ ಪ್ರದೇಶಗಳಿಗೆ ಕೂಡಲೇ ನೀರು ಬಿಡುಗಡೆ ಕ್ರಮ ವಹಿಸಬೇಕು ಎಂದು ತಿಳಿಸಿದರು.ಅಥಣಿ ಕಾಗವಾಡ ಭಾಗದಲ್ಲಿ ಕುಡಿಯುವ ನೀರು ಪೂರೈಕೆಗೆ ಪ್ರದೇಶಗಳನ್ನು ಪರಿಶೀಲನೆ ನಡೆಸಿ ಜಲಾಶಯಗಳಿಂದ ನೀರು ಬಿಡುಗಡಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.ಸರ್ಕಾರದ ಮಾರ್ಗಸೂಚಿ ಪ್ರಕಾರ ಸಿಂಗಲ್–ಫೇಸ್ ಮೂಲಕ ವಿದ್ಯುತ್ ನೀಡಬೇಕು. ಮನೆಗಳಿಗೆ ವಿದ್ಯುತ್ ಕಡಿತವಾಗಬಾರದು. ಕುಡಿಯುವ ನೀರು ಪೂರೈಕೆಗೆ ಪ್ರತಿ ದಿನ ಒಂದು ಗಂಟೆ ತ್ರಿ–ಫೇಸ್ ಮೂಲಕ ವಿದ್ಯುತ್ ಒದಗಿಸಬೇಕು ಎಂದು ಎಸ್. ಪಿ ಭೀಮಾಶಂಕರ ಗುಳೇದ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತ ಲೋಕೇಶ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಟರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಹೇಶ್ ಕೋಣಿ, ಪಶು ಸಂಗೋಪನಾ ಇಲಾಖೆ ಉಪ ನಿರ್ದೇಶಕ ಡಾ. ರಾಜೀವ ಕೂಲೇರ ಹಾಗೂ ತೋಟಗಾರಿಕೆ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಕಾಂಗ್ರೆಸ್ ಅಭ್ಯರ್ಥಿ ಚಿಕ್ಕೋಡಿ ಲೋಕಸಭಾ ಅಭ್ಯರ್ಥಿ ಪ್ರಿಯಾಂಕ ಜಾರಕಿಹೊಳಿಗೆ ಭೇಟಿಯಾದ ಲಕ್ಷ್ಮಿ ಹೆಬ್ಬಾಳ್ಕರ್ ಸಮಾಲೋಚನೆ

ಬೆಳಗಾವಿ.: ಗೋಕಾಕ ನಗರದ ಸಚಿವ ಸತೀಶ್ ಜಾರಕಿಹೊಳಿ ಅವರ ಗೃಹದಲ್ಲಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಭೇಟಿಯಾದರು.

ತಮ್ಮ ಮಗ ಬೆಳಗಾವಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಗೋಕಾಕ ಹಾಗೂ ಅರಭಾವಿ ಕ್ಷೇತ್ರದ ಚುನಾವಣೆ ಪ್ರಚಾರ ಸಭೆ ಹಮ್ಮಿಕೊಂಡಿದ್ದಾರೆ. ಇದೆ ಸಂದರ್ಭದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಭೇಟಿಯಾಗಿ ಪ್ರಸ್ತುತ ರಾಜಕೀಯ ಕುರಿತು ಸಮಾಲೋಚನಾ ನಡೆಸಿದರು.*

## ಬೆಳಗಾವಿಗೆ ಕಿಂಗ್ ಮೇಕರ್ ಸಾಹುಕಾರ ಎಂಟ್ರಿ



ಬೆಳಗಾವಿ : ಗುರುವಾರ ಬೆಳಗಾವಿಯ ಇರುವ ಮಂಗಳಾ ಸುರೇಶ್ ಅಂಗಡಿ ಅವರ ಪಕ್ಷದ ಕಚೇರಿಗೆ ಆಗಮಿಸಿದ ಮಾಜಿ ಸಚಿವರು ಹಾಗೂ ಗೋಕಾಕಿನ ಶಾಸಕರಾದ ರಮೇಶ್ ಜಾರಕಿಹೊಳಿ ಅವರು ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಅವರನ್ನು ಭೇಟಿ ಮಾಡಿದ್ದಾರೆ ಬಿಜೆಪಿಗೆ ಮತ್ತಷ್ಟು ಬಲ ತಂದ ಕಿಂಗ ಮೇಕರ

ಶೆಟ್ಟರಗೆ ಸತ್ಕರಿಸಿ, ಶುಭಾಶಯ ತಿಳಿಸಿದ ರಮೇಶ ಸಾಹುಕಾರ್ ಮಧ್ಯಾಹ್ನ ಆಗಮಿಸಿದ ಸಾಹುಕಾರರು, ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವ ಜಗದೀಶ ಶೆಟ್ಟರ ಅವರನ್ನು ಅಭಿನಂದಿಸಿ, ಜಿಲ್ಲಾ ಬಿಜೆಪಿಯ ಎಲ್ಲಾ ನಾಯಕರೂ ತಮ್ಮ ಜೊತೆಗೆ ಇದ್ದೇವೆ ಎಂಬ ಭರವಸೆ ನೀಡಿದ್ದಾರೆ ಚುನಾವಣೆಯ ಪ್ರಚಾರದ ಸ್ಥಿತಿಗತಿಗಳ ಬಗ್ಗೆ ಚರ್ಚೆ ಮಾಡಿದ ಶಾಸಕರು, ಬರುವ ದಿನಗಳಲ್ಲಿ ಯಾವ ರೀತಿಯಲ್ಲಿ ಪ್ರಚಾರ ಮಾಡಿ, ಜನಬಲ ಪಡೆದು, ಈ ಚುನಾವಣೆಯಲ್ಲಿ ವಿಜಯಿಯಾಗಬೇಕೆಂಬ ವಿಚಾರ ವಿನಿಮಯಗಳು ನಡೆದಿರಬಹುದೆಂಬ ಮಾಹಿತಿ ಇದೆ ಒಟ್ಟಿನಲ್ಲಿ ಸಾಹುಕಾರರ ಸಾಥ್ ಸಿಕ್ಕಿರುವ ಶೆಟ್ಟರ್ ಅವರ ಆತ್ಮವಿಶ್ವಾಸ ಇಮ್ಮಡಿಯಾಗಿದ್ದು, ಪೂರ್ಣ ಪ್ರಮಾಣದ ಪ್ರಚಾರದಲ್ಲಿ ರಮೇಶ್ ಜಾರಕಿಹೊಳಿ ಅವರು ಇಳಿದರೆ, ಬಿಜೆಪಿಯ ಬಾವುಟ ಮತ್ತಷ್ಟು ಮೇಲೆ ರಾರಾಜಿಸುತ್ತದೆ ಈ ಭೇಟಿಯ ಸಂದರ್ಭದಲ್ಲಿ ಬಿಜೆಪಿ ಬೆಳಗಾವಿ ಗ್ರಾಮೀಣ ಅಧ್ಯಕ್ಷರಾದ ಸುಭಾಸ ಪಾಟೀಲ, ಬಿಜೆಪಿ ಮುಖಂಡರಾದ ಕಿರಣ ಜಾಧವ, ಮುರುಗೆಂದ್ರಗೌಡ ಪಾಟೀಲ, ಮತ್ತಿತರ ಬಿಜೆಪಿ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು

## ರೈಲ್ವೆ ಕಾಮಗಾರಿ: ಹುಬ್ಬಳ್ಳಿ ಬೆಳಗಾವಿ ಮಾರ್ಗದ ವಿವಿಧ ರೈಲು ಸಂಚಾರ ವಿಳಂಬ

ಬೆಂಗಳೂರು: ಮುಗದ–ಧಾರವಾಡ–ಹುಬ್ಬಳ್ಳಿ ಮತ್ತು ಗದಗ ರೈಲು ಮಾರ್ಗದಲ್ಲಿ ಹಳಿ ಸುರಕ್ಷತೆ ಪರಿವಿ?ಕ್ಷಣೆ ಹಿನ್ನೆಲೆಯಲ್ಲಿಈ ಮಾರ್ಗದ ಕೆಲವು ರೈಲುಗಳ ಸಂಚಾರದಲ್ಲಿ ವ್ಯತ್ಯಯವಾಗಲಿದೆ. ಅಲ್ಲದೆ ಕೆಲವು ರೈಲು ಸಂಚಾರ ಭಾಗಶಃ ರದ್ದುಪಡಿಸಲಾಗಿದೆ.

ಭದ್ರಾಚಲಂ ರಸ್ತೆ–ಬೆಳಗಾವಿ (07336) ಎಕ್ಸಪ್ರೆಸ್ ರೈಲು ಮಾರ್ಚ್ 31 ರಿಂದ ಏಪ್ರಿಲ್ 5 ರವರೆಗೆ 30 ನಿಮಿಷ ತಡವಾಗಿ ಸಂಚರಿಸಲಿದೆ. ಅದೇ ರೀತಿ (07332) ಹುಬ್ಬಳ್ಳಿ–ಮಿರಜ್(07332) ಎಕ್ಸಪ್ರೆಸ್ ರೈಲು ಸಂಚಾರ ಏ.7ರಿಂದ 11ರವರಗೆ 30 ನಿಮಿಷದಿಂದ ಒಂದು ಗಂಟೆವರೆಗೆ ತಡವಾಗಲಿದೆ.ಹುಬ್ಬಳ್ಳಿ–ಚಿತ್ರದುರ್ಗ–ಹುಬ್ಬಳ್ಳಿ (17347/17348) ರೈಲು ಸಂಚಾರವನ್ನು ಏ.2ರಂದು ರದ್ದುಗೊಳಿಸಲಾಗಿದೆ. ಬಳ್ಳಾರಿ–ದಾವಣಗೆರೆ(07395/07396) ಡೆಮು ಸ್ಪೆಶಲ್ ರೈಲು ಏ.2ರಂದು ಅಮರಾವತಿ ಕಾಲೊನಿ–ದಾವಣಗೆರೆ ಮಧ್ಯೆ ಸಂಚರಿಸುವುದಿಲ್ಲ.

ಬಿಕಾನೇರ–ಯಶವಂತಪುರ ಎಕ್ಸಪ್ರೆಸ್ ರೈಲು ಮಾ.31ರಂದು 120 ನಿಮಿಷ ಪರಿಷ್ಕರಿಸಿದ್ದು, ಮಾರ್ಗಮಧ್ಯೆ 60 ನಿಮಿಷ ನಿಲುಗಡೆಯಾಗಲಿದೆ. ಇದೇ ರೀತಿ ಬೆಳಗಾವಿ–ಮೈಸೂರು ರೈಲು (17325) ಏ.2ರಂದು 90 ನಿಮಿಷ ಪರಿಷ್ಕೃತ ಸಮಯದಲ್ಲಿಸಂಚರಿಸಲಿದ್ದು, ಮಾರ್ಗ ಮಧ್ಯೆ 60 ನಿಮಿಷ ನಿಲುಗಡೆಯಾಗಲಿದೆ. ಅರಸಿಕೆರೆ–ಹುಬ್ಬಳ್ಳಿ ರೈಲು(16213) ಏ.2, 5 ಮತ್ತು 7ರಂದು 90 ನಿಮಿಷ ಪರಿಷ್ಕೃತ ವೇಳಾಪಟ್ಟಿಯೊಂದಿಗೆ ಸಂಚರಿಸಲಿದ್ದು, ಮಾರ್ಗದಲ್ಲಿ45, 90 ಹಾಗೂ 60 ನಿಮಿಷ ನಿಲುಗಡೆಯಾಗಲಿದೆ. ವಾಸ್ಕೊ?–ಯಶವಂಪುರ(17310) ರೈಲು ಏ.5ರಂದು 45 ನಿಮಿಷ ಮಾರ್ಗದಲ್ಲಿನಿಲುಗಡೆಯಾಗಲಿದೆ ಎಂದು ನೈರುತ್ಯ ರೈಲ್ವೆ ತಿಳಿಸಿದೆ.

ನಾಗರ್‌ಕೋಯಿಲ್ ಟೌನ್, ನಾಗರ್‌ಕೋಯಿಲ್, ಅರಳವಾಯ್ಮೊಳಿ ಮತ್ತು ಕನ್ಯಾಕುಮಾರಿ ವಿಭಾಗದಲ್ಲಿ ನಡೆಯುತ್ತಿರುವ ರೈಲ್ವೆ ಕಾಮಗಾರಿಯಿಂದ ಕೆಲ ರೈಲುಗಳ ಸಂಚಾರ ಭಾಗಶಃ ರದ್ದಾಗಲಿದೆ.



ಬೆಳಗಾವಿ : ಗ್ರಾಮಂತರ ಜಿಲ್ಲೆ ಕಾರ್ಯಾಲಯದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಭಾರತೀಯ ಜನತಾ ಪಾರ್ಟಿ ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಜಗದೀಶ್ ಶೆಟ್ಟರ್ ಅವರು ಇಂದು ಬೆಳಗಾವಿ ನಗರದಲ್ಲಿ ಕೂಡಲಸಂಗಮ ಪಂಚಮಸಾಲಿ ಪೀಠದ ಶ್ರೀ ಬಸವಜಯಮೃತ್ಯುಂಜಯ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಸಂಸದರಾದ ಶ್ರೀಮತಿ ಮಂಗಳಾ ಅಂಗಡಿ, ಮಾಜಿ ಶಾಸಕರಾದ ಶ್ರೀ ಸಂಜಯ ಪಾಟೀಲ್, ಬೆಳಗಾವಿ ಗ್ರಾಮಂತರ ಜಿಲ್ಲಾಧ್ಯಕ್ಷ ಸುಭಾ?ಿ ಪಾಟೀಲ, ಮಾಜಿ ವಿಧಾನಪರಿ?ತ್ ಸದಸ್ಯರಾದ ಶ್ರೀ ಮಹಾಂತೇಶ ಕವಟಗಿಮಠ, ಪ್ರಮುಖರಾದ ಆರ್.ಕೆ.ಪಾಟೀಲ್, ರಾಜೇಂದ್ರ ಹರಕುಣಿ, ಮುರಗೇಂದ್ರಗೌಡ ಪಾಟೀಲ್ ಹಾಗೂ ಪಕ್ಷದ ಪದಾಧಿಕಾರಿಗಳು,ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕಡ್ಡಾಯ ಮತದಾನ ಪ್ರಜಾಪ್ರಭುತ್ವದ ಬುನಾದಿ : ತಾಪಂ ಇಒ ವಿಶ್ವನಾಥ ಹೊಸಮನಿ



ಮುಂಡರಗಿ : ಮೇ ಏಳರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯ ಮತದಾನದ ಮೂಲಕ ಪ್ರಜಾಪ್ರಭುತ್ವದ ಬುನಾದಿಯನ್ನು ಗಟ್ಟಿಗೊಳಿಸಬೇಕು ಎಂದು ತಾಲೂಕು ಪಂಚಾಯತ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಸಮನಿ ಹೇಳಿದರು.

ಮುಂಡರಗಿ ಪಟ್ಟಣದ ತಾಪಂ ಆವರಣದಲ್ಲಿ ಗದಗ ಜಿಲ್ಲಾ ಮತ್ತು ಮುಂಡರಗಿ ತಾಲೂಕು ಚುನಾವಣೆ ಸ್ವೀಪ್ ಸಮಿತಿ, ತಾಲೂಕು ಪಂಚಾಯತ ಮುಂಡರಗಿ ವತಿಯಿಂದ ಹಮ್ಮಿಕೊಂಡಿದ್ದ ವಿಶೇಷಚೇತನರ ಮೂಲಕ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ತಹಶೀಲದಾರ ಧನಂಜಯ ಕುಂಬ್ಳೆ ಅವರ ಜೊತೆ ಜಂಟಿಯಾಗಿ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾನ ಸಂವಿಧಾನ ನಮಗೆ ನೀಡಿರುವ ಅಮೂಲ್ಯ ಹಕ್ಕು. ಆಸೆ–ಆಮಿಷಗಳಿಗೆ ಒಳಗಾಗದೆ ಉತ್ತಮ ಎನಿಸಿದ ಅಭ್ಯರ್ಥಿಗೆ ಮತ ಚಲಾಯಿಸುವ ಕೆಲಸ ನಮ್ಮ ಪ್ರಮುಖ ಆದ್ಯತೆಯಾಗಬೇಕು. ಈ ಸಾರಿಯ ಲೋಕಸಭಾ ಚುನಾವಣೆಯಲ್ಲಿ ನಮ್ಮ ಮತದಾನದ ಪ್ರಮಾಣ ನೂರರಷ್ಟಾದರೆ ಮತದಾನದ ಪ್ರಾಮುಖ್ಯತೆಗೆ ಅರ್ಥ ಬರುತ್ತದೆ. ಆ ಕಾರಣಕ್ಕಾಗಿ ಮತ ಚಲಾಯಿಸುವ ಮೂಲಕ ಸಂವಿಧಾನ ನಮಗೆ ನೀಡಿರುವ ಹಕ್ಕನ್ನು ತಪ್ಪದೇ ಚಲಾಯಿಸಬೇಕು ಎಂದರು.

ಜಾಥಾದಲ್ಲಿ ಭಾಗವಹಿಸಿ ಜಂಟಿಯಾಗಿ ಚಾಲನೆ ನೀಡಿದ ಬಳಿಕ ಮಾತನಾಡಿದ ತಹಶೀಲದಾರ ಧನಂಜಯ ಮಾಲಗತ್ತಿ ಅವರು, ಸಾರ್ವಜನಕರು ಮತದಾನದಿಂದ ವಿಮುಖರಾಗದೆ ಕಡ್ಡಾಯವಾಗಿ ಮತ ಚಲಾಯಿಸುವ ಮೂಲಕ ಜವಾಬ್ದಾರಿ ಮೆರೆಯಬೇಕು. ಮುಂಡರಗಿ ತಾಲೂಕಿನ ಎಲ್ಲ ಗ್ರಾಮಗಳಲ್ಲೂ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಪಟ್ಟಣದ ತಾಲೂಕು ಪಂಚಾಯತ ಆವರಣ ದಿಂದ ಆರಂಭವಾದ ಮತದಾನ ಜಾಗೃತಿ ವಿಶೇಷಚೇತನರ ಬೈಕ್ ಜಾಥಾ ಬೃಂದಾವನ ವೃತ್ತ, ಮೇನ್ ಬಜಾರ್, ಬಸ್ ನಿಲ್ದಾಣ ಮಾರ್ಗವಾಗಿ ಸಂಚರಿಸುತ್ತಾ ಮತದಾನ ಜಾಗೃತಿ ಕುರಿತಾದ ವಿಶೇಷ ಘೋಷಣೆಗಳನ್ನು ಕೂಗುವ ದರೊಂದಿಗೆ ಸಾರ್ವಜನಕರಲ್ಲಿ ಕಡ್ಡಾಯ ಮತದಾನದ ಬಗ್ಗೆ ಅರಿವು ಮೂಡಿಸಲಾಯಿತು.

ಕಡ್ಡಾಯ ಮತದಾನ ಜಾಗೃತಿ ಜಾಥಾದಲ್ಲಿ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಪ್ರವೀಣ್ ಗೋಣೆಮ್ಮನವರ, ಪಿಡಿಒ ಫಕ್ರುದ್ದೀನ್ ನದಾಫ, ತಾಲೂಕು ಪಂಚಾಯತ ಸಿಬ್ಬಂದಿ ಇದ್ದರು.

## ಕುಡಿಯುವ ನೀರಿನ ಸಮಸ್ಯೆ ಪರಿಹಾರ



ಕೊಪ್ಪಳ ಮಾರ್ಚ್ 29 : ಕೊಪ್ಪಳ ತಾಲೂಕಿನ ಬಿಸರಳ್ಳಿ ಗ್ರಾಮದಲ್ಲಿ ಉಂಟಾಗಿದ್ದ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲಾಗಿದೆ ಎಂದು ಕೊಪ್ಪಳ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ತಿಳಿಸಿದ್ದಾರೆ.

ಬಿಸರಳ್ಳಿ ಗ್ರಾಮದಲ್ಲಿ 4,120 ಜನಸಂಖ್ಯೆ ಇದ್ದು, 05 ಕುಡಿಯುವ ನೀರಿನ ಬೋರ್‌ವೆಲ್ ಇರುತ್ತವೆ. ಬೋರ್‌ವೆಲ್‌ಗಳಿಂದ ಸರಬರಾಜು ಆಗುತ್ತಿರುವ ಕುಡಿಯುವ ನೀರು ಬಹಳಷ್ಟು ಗಡಸುತನ ಇರುವುರಿಂದ ಕುಡಿಯಲು ಯೋಗ್ಯವಾಗಿರುವುದಿಲ್ಲ. ಬಿಸರಳ್ಳಿ ಗ್ರಾಮಕ್ಕೆ ಸಿಹಿ ನೀರು ಸರಬರಾಜು ಮಾಡಲು ಬೇಳೂರು ಗ್ರಾಮದ ಹತ್ತಿರ ಇರುವ ತುಂಗಭದ್ರಾ ಹಿನ್ನೀರಿನ ವ್ಯಾಪ್ತಿಯಲ್ಲಿ 05 ಕುಡಿಯುವ ನೀರಿನ ಬೋರ್‌ವೆಲ್‌ಗಳಿದ್ದು, ಅಲ್ಲಿನ ಪಂಪ್‌ಹೌಸ್ ಮೂಲಕ ಬಿಸರಳ್ಳಿ ಗ್ರಾಮಕ್ಕೆ ಸಿಹಿ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಕಳೆದ 04 ದಿನಗಳಿಂದ ಬೇಳೂರು ಗ್ರಾಮದ ಹತ್ತಿರ ಇರುವ ತುಂಗಭದ್ರಾ ಹಿನ್ನೀರಿನ ವ್ಯಾಪ್ತಿಯಲ್ಲಿನ ಪಂಪ್‌ಹೌಸ್‌ನಲ್ಲಿ ಪಂಪ್‌ಹೌಸ್ ಬೋರ್‌ವೆಲ್ ಮೋಟಾರ್‌ಗಳು ಸುಟ್ಟಿದ್ದರಿಂದ ಬಿಸರಳ್ಳಿ ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ಅಡಚಣೆಯಾಗಿತ್ತು. ಈ ಸಂದರ್ಭದಲ್ಲಿ ಬಿಸರಳ್ಳಿ ಗ್ರಾಮದಲ್ಲಿರುವ 05 ಬೋರ್‌ವೆಲ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗಿರುತ್ತದೆ.

ಮಾ.28 ರಂದು ಬೇಳೂರು ಗ್ರಾಮದ ಹತ್ತಿರ ಇರುವ ತುಂಗಭದ್ರಾ ಹಿನ್ನೀರಿನ ವ್ಯಾಪ್ತಿಯಲ್ಲಿನ ಪಂಪ್‌ಹೌಸ್ ನಲ್ಲಿ ಪಂಪ್‌ಹೌಸ್ ಬೋರ್‌ವೆಲ್‌ಗಳಿಗೆ ಹೊಸ ಮೋಟಾರ್ ಗಳನ್ನು ಅಳವಡಿಸಿ ಸಣ್ಣ–ಪುಟ್ಟ ದುರಸ್ಥಿ ಕೈಗೊಂಡು ಬಿಸರಳ್ಳಿ ಗ್ರಾಮಕ್ಕೆ ಕುಡಿಯಲು ಸಿಹಿ ನೀರು ಸರಬರಾಜು ಮಾಡಲಾಗುತ್ತಿದೆ. ಗ್ರಾಮದಲ್ಲಿ ಕುಡಿಯುವ ನೀರು ಸಮಸ್ಯೆಯಾಗದಂತೆ ಗ್ರಾಮ ಪಂಚಾಯತಿ ವತಿಯಿಂದ ಎಲ್ಲಾ ಕ್ರಮ ವಹಿಸಲಾಗಿರುತ್ತದೆ ಎಂದು ತಾ.ಪಂ. ಇಒ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಧಿಕೃತ ಮರಳು ಸಾಗಾಣಿಕೆದಾರರಿಗೆ ಎಚ್ಚರಿಕೆ

ಕೊಪ್ಪಳ ಮಾರ್ಚ್ 29 : ಕೊಪ್ಪಳ ತಾಲ್ಲೂಕಿನ ಅಳವಂಡಿ ಹೋಬಳಿಯ ಕೇಸಲಾಪುರ, ಹಲವಾಗಲಿ, ನಲೋಗಿಪುರ, ಹಳೇನಲೋಗಿಪುರ ಮತ್ತು ತಿಗರಿ ಗ್ರಾಮ ವ್ಯಾಪ್ತಿಯ ತುಂಗಾಭದ್ರಾ ನದಿಯಲ್ಲಿ ಬೇಸಿಗೆ ನಿಮಿತ್ತ ನೀರಿನ ಹರಿವು ಕಡಿಮೆಯಾಗಿದ್ದು, ಮರಳಿನ ಸಂಚಯವಾಗಿದೆ. ನದಿ ಪಾತ್ರ ಮತ್ತು ತುಂಗಾಭದ್ರಾ ಜಲಾಶಯದ ಹಿನ್ನೀರಿನ ಪ್ರದೇಶದಲ್ಲಿ (Project Area) ಅನಧಿಕೃತವಾಗಿ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ ನಡೆಯುತ್ತಿದ್ದು, ಈ ಬಗ್ಗೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ವತಿಯಿಂದ ನಿರಂತರ ಗಸ್ತು ಪಹರೆ ನಡೆಸಿ ವಶಪಡಿಸಿಕೊಳ್ಳಲಾಗಿದ್ದು, ಮರಳಿನ ದಾಸ್ತಾನನ್ನು ವಿಲೇವಾರಿ ಮಾಡಲಾಗುತ್ತಿದೆ. ಮೇಲ್ಕಂಡ ಗ್ರಾಮಗಳ ಜನರು ರಾತ್ರಿ ವೇಳೆ ಏಕಾಏಕಿ ಸುಮಾರು 150 ರಿಂದ 200 ಟ್ರಾಕ್ಟರ್‌ಗಳಲ್ಲಿ ನದಿ ಮರಳನ್ನು ಎತ್ತುವಳಿ ಮಾಡಿ ಸಾಗಾಣಿಕೆ ಮಾಡಲು ಯತ್ನಿಸುತ್ತಿ ರುವುದು ಕಂಡುಬಂದಿದ್ದು, ಈ ಕೃತ್ಯವು ಕಾನೂನುಬಾಹಿರವಾಗಿದ್ದು, ನಿಯಂತ್ರಣಗೊಳಿಸಲು ಕಷ್ಟಸಾಧ್ಯವಾಗುತ್ತಿದ್ದು ಕಾನೂನು ಸುವ್ಯವಸ್ಥೆಗೂ ಭಂಗವಾಗುತ್ತಿದೆ. ಆದ್ದರಿಂದ ಅಳವಂಡಿ ಹೋಬಳಿಯ ಕೇಸಲಾಪುರ, ಹಲವಾಗಲಿ, ನಲೋಗಿಪುರ, ಹಳೇನಲೋಗಿಪುರ ಮತ್ತು ತಿಗರಿ ಗ್ರಾಮಗಳ ಗ್ರಾಮಸ್ಥರು ಅನಧಿಕೃತ ಮರಳು ಎತ್ತುವಳಿ ಮತ್ತು ಸಾಗಾಣಿಕೆ ಚಟುವಟಿಕೆ ಯತ್ನಗಳನ್ನು ಈ ಕೂಡಲೇ ಕೈಬಿಡಬೇಕು. ತಪ್ಪಿದಲ್ಲಿ ಟ್ರಾಕ್ಟರ್ ವಾಹನಗಳ ಮಾಲೀಕರು ಮತ್ತು ಚಾಲಕರ ವಿರುದ್ಧ ಜಿಲ್ಲಾ ಮರಳು ಉಸ್ತುವಾರಿ ಸಮಿತಿ/ ತಾಲೂಕು ಮರಳು ಉಸ್ತುವಾರಿ ಸಮಿತಿ ಹಾಗೂ ಗ್ರಾಮ ಖನಿಜ ಉಸ್ತುವಾರಿ ಸಮಿತಿಗಳ ಸದಸ್ಯ ಇಲಾಖೆಗಳ ಸಕ್ಷಮ ಅಧಿಕಾರಿಗಳ ಸಹಯೋಗದಲ್ಲಿ ದಂಡ ವಿಧಿಸಿ/ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಿಂದ ಚೆಕ್‌ಪೋಸ್ಟ್ ಗಳಿಗೆ ಭೇಟಿ, ಖುದ್ದು ವಾಹನಗಳ ಪರಿಶೀಲನೆ



ಕೊಪ್ಪಳ ಮಾರ್ಚ್ 29 : ಲೋಕಸಭಾ ಚುನಾವಣೆ 2024 ರ ನಿಮಿತ್ತ ಜಿಲ್ಲೆಯ ವಿವಿಧೆಡೆ ತೆರೆದಿರುವ ವಿವಿಧ ಚೆಕ್‌ಪೋಸ್ಟ್‌ಗಳಿಗೆ ಮಾರ್ಚ್ 28 ರ ರಾತ್ರಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ರಾತ್ರಿ 10:30 ಕ್ಕೆ ಕೊಪ್ಪಳ ತಾಲ್ಲೂಕು ದದೇಗಲ್ ಚೆಕ್‌ಪೋಸ್ಟ್, 11:20 ಕ್ಕೆ ಬನ್ನಿಕೊಪ್ಪ ಚೆಕ್‌ಪೋಸ್ಟ್, 1 ಗಂಟೆಗೆ ಯಲಬುರ್ಗಾ ತಾಲೂಕು ಸಂಕನೂರ್ ಹಾಗೂ 1:30 ಕ್ಕೆ ಬಂಡಿ ಕ್ರಾಸ್ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ, ತಾವೇ ಖುದ್ದಾಗಿ ವಾಹನಗಳ ಪರಿಶೀಲನೆ ನಡೆಸಿದರು. ಚೆಕ್‌ಪೋಸ್ಟ್ ಸಿಬ್ಬಂದಿಗಳು ನಿಯಮಾನುಸಾರ ವಾಹನಗಳ ತಪಾಸಣೆ ನಡೆಸುವಂತೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಚೆಕ್‌ಪೋಸ್ಟ್‌ಗಳಲ್ಲಿ ಸಿಬ್ಬಂದಿಗಳ ಹಾಜರಾತಿ ಪರಿಶೀಲನೆ ನಡೆಸಿ, ಚೆಕ್‌ಪೋಸ್ಟ್ ಗಳಲ್ಲಿ ಕಲ್ಪಿಸಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿದರು.